# ಇಂಧನ ಇಲಾಖೆ

(ಮಾರ್ಚ್ 2019 ರ ಅಂತ್ಯಕ್ಕೆ ಅನ್ವಯವಾಗುವಂತೆ ಪರಿಷ್ಕರಿಸಿದೆ)

# ಮಾಹಿತಿ ಹಕ್ಕು ಕೈಪಿಡಿ

ಮಾಹಿತಿ ಹಕ್ಕು ಅಧಿನಿಯಮ 2005 ರ ಸೆಕ್ಷನ್ 4 (1) (ಬಿ)

ಅನ್ವಯ ಪ್ರಕಟಿಸಲಾಗಿದೆ

# ಪರಿವಿಡಿ

| ಕ್ರಮ ಸಂಖ್ಯೆ | ವಿವರ |
|---|---|
| 1 | ಇಂಧನ ಇಲಾಖೆಯ ಸಂಸ್ಥಾಪಟ (Organisation Chart) ಕಾರ್ಯಕ್ರಮಗಳು ಮತ್ತು ಕರ್ತವ್ಯಗಳ ವಿವರಗಳು |
| 2 | ಜಾರಿಯಲ್ಲಿರುವ ಸಮಿತಿಗಳು |
| 3 | ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರ ನಿರ್ದೇಶಿಕೆ |
| 4 | ಇಲಾಖೆಯ ಆಯವ್ಯಯ |
| 5 | ಮಾಹಿತಿ ಹಕ್ಕು ಅಧಿನಿಯಮದ ಕಲಂ 5(1) ಮತ್ತು 5(2) |

# ಕರ್ನಾಟಕ ಸರ್ಕಾರದ ಸಚಿವಾಲಯ

## ಇಂಧನ ಇಲಾಖೆ

## ಮಾಹಿತಿ ಹಕ್ಕು ಅಧಿನಿಯಮ ಕೈಪಿಡಿ ಸೆಕ್ಷನ್ 4 (1) (ಬಿ) ಅನ್ವಯ

1) ಇಂಧನ ಇಲಾಖೆಯ ರಚನೆ ಕಾರ್ಯಗಳು ಹಾಗೂ ಕರ್ತವ್ಯಗಳು:-

ಕರ್ನಾಟಕ ಸರ್ಕಾರ ಸಚಿವಾಲಯದ ಇಲಾಖೆಗಳಲ್ಲಿ ಇಂಧನ ಇಲಾಖೆಯು ಒಂದು ಇಲಾಖೆಯಾಗಿದ್ದು, ಇದರ ಕಛೇರಿಯು 2ನೇ ಮಹಡಿ, ವಿಕಾಸ ಸೌಧ, ಡಾ:ಅಂಬೇಡ್ಕರ್ ವೀಧಿ, ಬೆಂಗಳೂರು-560001 ಇಲ್ಲಿ ಕಾರ್ಯನಿರ್ವಹಿಸುತ್ತಿದೆ. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಈ ಇಲಾಖೆಯಲ್ಲಿ ಮುಖ್ಯಸ್ಥರಾಗಿರುತ್ತಾರೆ. ಈ ಇಲಾಖೆಯಲ್ಲಿ ಒಂದು ಉಪ ಕಾರ್ಯದರ್ಶಿ, ಒಂದು ಅಧೀನ ಕಾರ್ಯದರ್ಶಿ, ಒಂದು ಪೀಠಾಧಿಕಾರಿ ಹಾಗೂ ಎರಡು ಶಾಖಾಧಿಕಾರಿಗಳು ಮತ್ತು ಇತರೆ ಪೂರಕ ಸಿಬ್ಬಂದಿ ವರ್ಗದವರು ಇರುತ್ತಾರೆ. ಮುಂದುವರೆದು ವಿಶೇಷಾಧಿಕಾರಿ (ಸುಧಾರಣೆ), ಮೂರು ಕಾರ್ಯಪಾಲಕ ಅಭಿಯಂತರರು ಮತ್ತು ಇತರೆ ಪೂರಕ ಸಿಬ್ಬಂದಿ ವರ್ಗದವರು ಓ.ಓ.ಡಿ. ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ.

### ಕಾರ್ಯಗಳು ಮತ್ತು ಕರ್ತವ್ಯಗಳು

ಇಂಧನ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಕ್ಷೇತ್ರ ಇಲಾಖೆಗಳ ಮುಖ್ಯಸ್ಥರನ್ನೊಳಗೊಂಡ ಇಲಾಖೆ / ನಿಗಮ / ಸಂಸ್ಥೆಗಳು ತಾಂತ್ರಿಕ, ಆರ್ಥಿಕ ಹಾಗೂ ಸೇವೆಗಳಿಗೆ ಸಂಬಂಧಿಸಿದ ಕೆಲಸಕಾರ್ಯಗಳನ್ನು ನಿರ್ವಹಿಸುತ್ತಿವೆ.

| | |
|---|---|
| 1. | ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1. |
| 2. | ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಕೆ. ಜಿ. ರಸ್ತೆ, ಬೆಂಗಳೂರು-9. |
| 3. | ವ್ಯವಸ್ಥಾಪಕ ನಿರ್ದೇಶಕರು,<br>ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಾರ್ಪೋರೇಟ್ ಕಚೇರಿ, ಕೆಆರ್ ವೃತ್ತ ಬೆಂಗಳೂರು-01. |
| 4. | ವ್ಯವಸ್ಥಾಪಕ ನಿರ್ದೇಶಕರು,<br>ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಗಮ ನಿಯಮಿತ, ಕಾರ್ಪೋರೇಟ್ ಕಛೇರಿ, ನವನಗರ, ಹುಬ್ಬಳ್ಳಿ-580 025. |

| | |
|---|---|
| 5. | ವ್ಯವಸ್ಥಾಪಕ ನಿರ್ದೇಶಕರು,<br>ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಗಮ ನಿಯಮಿತ ಕಾರ್ಪೋರೇಟ್ ಕಛೇರಿ, ಸ್ಟೇಷನ್ ರಸ್ತೆ, ಪರಿವಾಲ್ ಹೋಟೆಲ್ ಎದುರುಗಡೆ, ಕಲಬುರ್ಗಿ-585 102. |
| 6. | ವ್ಯವಸ್ಥಾಪಕ ನಿರ್ದೇಶಕರು,<br>ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಗಮ ನಿಯಮಿತ ಕಾರ್ಪೋರೇಟ್ ಕಛೇರಿ, ಅಂಚೆ ಪೆಟ್ಟಿಗೆ ಸಂಖ್ಯೆ :200, ಪ್ಯಾರಾಡಿಂ ಪ್ಲಾಜಾ, ಎ.ಬಿ. ಶೆಟ್ಟಿ ವೃತ್ತ, ಮಂಗಳೂರು-575001. |
| 7. | ವ್ಯವಸ್ಥಾಪಕ ನಿರ್ದೇಶಕರು,<br>ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ ನಿಗಮ ನಿಯಮಿತ ನಂ.29, 80 ಅಡಿ ರಸ್ತೆ, ವಿಜಯನಗರ 2 ನೇ ಹಂತ, ಹಿಣಕಲ್, ಮೈಸೂರು – 570017. |
| 8. | ವ್ಯವಸ್ಥಾಪಕ ನಿರ್ದೇಶಕರು,<br>ಪವರ್ ಕಂಪನಿ ಆಫ್ ಕರ್ನಾಟಕ ನಿಯಮಿತ, ಕಾವೇರಿ ಭವನ, ಬೆಂಗಳೂರು-560009. |
| 9. | ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ: 39, ಶಾಂತಿಗೃಹ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕ್ಯಾಂಪಸ್, ಪ್ಯಾಲೇಸ್ ರಸ್ತೆ, ಬೆಂಗಳೂರು-01. |
| 10. | ಮುಖ್ಯ ವಿದ್ಯುತ್ ಪರಿವೀಕ್ಷಕರು,<br>ವಿದ್ಯುತ್ ಪರಿವೀಕ್ಷಣಾಲಯ ಇಲಾಖೆ, ನಿರ್ಮಾಣ ಭವನ, 2ನೇ ಮಹಡಿ, ಒರಿಯನ್ ಮಾಲ್ ಎದುರು, ಡಾ: ರಾಜಕುಮಾರ್ ರಸ್ತೆ, ರಾಜಾಜಿನಗರ, 1ನೇ ಬ್ಲಾಕ್, ಬೆಂಗಳೂರು. |
| 11. | ಕಾರ್ಯದರ್ಶಿ,<br>ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ, 6 ಮತ್ತು 7ನೇ ಮಹಡಿ, ಮಹಾಲಕ್ಷ್ಮಿ ಛೇಂಬರ್ಸ್, 9/2, ಎಂ.ಜಿ. ರಸ್ತೆ, ಬೆಂಗಳೂರು-1. |

II) ಇಂಧನ ಇಲಾಖೆಯ ಅಧಿಕಾರಿಗಳ ಮತ್ತು ನೌಕರರ ಅಧಿಕಾರ ಮತ್ತು ಕರ್ತವ್ಯಗಳು

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ: ಇಂಧನ ಇಲಾಖೆಯ ಅಧಿಕೃತ ಮುಖ್ಯಸ್ಥರಾಗಿದ್ದು, ಇಲಾಖಾ ಸಚಿವರ ನಿರ್ದೇಶನಗಳನ್ನು ನಿಯಮಗಳ ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರ (ವ್ಯವಹಾರ ಹಂಚಿಕೆ) ನಿಯಮಗಳು 1977ಕ್ಕೆ ಒಳಪಟ್ಟು ಪ್ರಕರಣಗಳ ವಿಲೇವಾರಿ ಮತ್ತು ಎಲ್ಲಾ ವ್ಯವಹಾರದ ಜವಾಬ್ದಾರಿ ಹೊಂದಿರುತ್ತಾರೆ ಹಾಗೂ ಅಧೀನ ಸಿಬ್ಬಂದಿಯ ಮೇಲ್ವಿಚಾರಣೆ ಮತ್ತು ನಿಯಂತ್ರಣದ ಅಧಿಕಾರವನ್ನು ಹೊಂದಿರುತ್ತಾರೆ.

2) ಸರ್ಕಾರದ ಉಪ ಕಾರ್ಯದರ್ಶಿ: ಇಲಾಖೆಯ ಸಂಘಟನೆ ಮತ್ತು ವಿಧಾನಾಧಿಕಾರಿಯಾಗಿ ಕರ್ನಾಟಕ ಸರ್ಕಾರದ ಸಚಿವಾಲಯ ಕೈಪಿಡಿಯಲ್ಲಿ ಸೂಚಿಸಿರುವ ರೀತಿಯಲ್ಲಿ ಕಾರ್ಯನಿರ್ವಹಣೆ ಮತ್ತು ಕಾಲಕಾಲಕ್ಕೆ ಅಪರ ಮುಖ್ಯ ಕಾರ್ಯದರ್ಶಿಯವರು ವಹಿಸಿಕೊಡುವ ಅಧಿಕಾರದನ್ವಯ ಕಾರ್ಯನಿರ್ವಹಣೆ ಹಾಗೂ ಅಧೀನ ಅಧಿಕಾರಿಗಳು / ಸಿಬ್ಬಂದಿಗಳು ಕೆಲಸ ನಿರ್ವಹಿಸುವಂತೆ ನೋಡಿಕೊಳ್ಳುವ ಹೊಣೆಗಾರಿಕೆ ಹೊಂದಿರುತ್ತಾರೆ.